**ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆಎಂಎಫ್ ಸಿ ನ್ಯಾಯಾಲಯ ಪಾವಗಡ**

ದಿನಾಂಕಃ 1/07/2023 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.

| | |
|---|---|
| ಹೆಸರು | ಪ್ರಭಾಕರ್ |
| ತಂದೆ ಹೆಸರು | ಅಂಜಣ್ಣ |
| ವಯಸ್ಸು | 49 ವರ್ಷ |
| ವೃತ್ತಿ | ವ್ಯಾಪಾರ |
| ವಾಸ | ಪಾವಗಡ |

**ಮುಖ್ಯವಿಚಾರಣೆಃ ಶ್ರೀ ಪಿ.ವಿ.ವೈ. ವಕೀಲರಿಂದ ವಾದಿ ಪರವಾಗಿ**

ನನ್ನ ಮುಖ್ಯ ವಿಚಾರಣೆಯ ಬಾಬ್ತು ಪ್ರಮಾಣ ಪತ್ರವನ್ನು ಹಾಜರು ಪಡಿಸುತ್ತಿದ್ದೇನೆ. ಸದರಿ ಪ್ರಮಾಣ ಪತ್ರದಲ್ಲಿ ಬರೆದಿರುವ ಅಂಶಗಳು ಸತ್ಯವಾಗಿರುತ್ತವೆ ಹಾಗೂ ಅದನ್ನು ಓದಿ ಅರ್ಥೈಸಿಕೊಂಡು ನನ್ನ ಸಹಿಯನ್ನು ಹಾಕಿರುತ್ತೇನೆ .

ನಿಪಿ-1 ದಾಖಲೆಯನ್ನು ನಾನು ಈಗ ನೋಡುತ್ತಿದ್ದೇನೆ . ಸದರಿ ದಾಖಲೆಗೆ ನಾನು ಮತ್ತು ಲೋಕೇಶ್ ರವರು ಸಾಕ್ಷಿದಾರರಾಗಿ ಸಹಿ ಮಾಡಿರುತ್ತೇವೆ . ಸದರಿ ಸಹಿಗಳನ್ನು ನಾನು ಈಗ ನೋಡುತ್ತಿದ್ದೇನೆ . ಸಾಕ್ಷಿ ನೋಡಿ ಗುರುತಿಸಿದ ಸದರಿ ಸಹಿಗಳನ್ನು ಈಗಾಗಲೇ ಅನುಕ್ರಮವಾಗಿ ನಿಪಿ-1(ಎ) ಮತ್ತು ನಿಪಿ-1(ಬಿ) ಎಂದು ಗುರುತಿಸಲಾಗಿರುತ್ತದೆ. ನಿಪಿ-1 ದಾಖಲೆಯನ್ನು ರುದ್ರಯ್ಯ ರವರು ತಯಾರಿಸಿದ್ದು , ಸದರಿ ದಾಖಲೆಯಲ್ಲಿರುವ ರುದ್ರಯ್ಯ ರವರ ಸಹಿಯನ್ನು ನಾನು ಈಗ ನೋಡುತ್ತಿದ್ದೇನೆ. ಸಾಕ್ಷಿ ನೋಡಿ ಗುರುತಿಸಿದ ಸದರಿ ಸಹಿಯನ್ನು ಈಗಾಗಲೇ ನಿಪಿ-1(ಸಿ) ಎಂದು ಗುರುತಿಸಲಾಗಿರುತ್ತದೆ. ನಿಪಿ-1 ದಾಖಲೆಗೆ ಪ್ರತಿವಾದಿ ಸಹಿ ಮಾಡಿರುತ್ತಾರೆ. ಸದರಿ ದಾಖಲೆಯಲ್ಲಿರುವ ಪ್ರತಿವಾದಿ ಸಹಿಯನ್ನು ನಾನು ಈಗ ನೋಡುತ್ತಿದ್ದೇನೆ . ಸಾಕ್ಷಿ ನೋಡಿ ಗುರುತಿಸಿದ ಸದರಿ ಸಹಿಯನ್ನು ಈಗಾಗಲೇ ನಿಪಿ -1 (ಡಿ) ಎಂದು ಗುರುತಿಸಲಾಗಿರುತ್ತದೆ .

**ಪಾಟೀಸವಾಲು ಃ ಶ್ರೀ ಪಿ. ಹೆಚ್ .ಎಸ್ .** ವಕೀಲರಿಂದ ಪ್ರತಿವಾದಿ ಪರವಾಗಿ

(ಈ ಹಂತದಲ್ಲಿ ಪ್ರತಿವಾದಿ ಪರ ವಕೀಲರು ಪಾಟೀಸವಾಲಿಗೆ ಕಾಲವಕಾಶ ಕೋರಿದ್ದು , ಕಾಲವಕಾಶ ನೀಡಲಾಯಿತು . )

(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)

**ಓ ತಿ ಹೇ ಸ ಇದೆ**

**ಪಿ ಸಿ ಜೆ ಮತ್ತು ಜೆ ಎಂ ಎಫ್ ಸಿ**

**ಪಾವಗಡ**